# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ | KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 324 | Pages. 2 | Date: 21-11-2025, FRIDAY | RNI NO: KARKAN/2024/89601 | Kannada Daily

ಸಂಪುಟ : 01 – ಸಂಚಿಕೆ : 324 – ಪುಟಗಳು : 2 | 21-11-2025 ಶುಕ್ರವಾರ | Ph: 8762954248 | ದರ : ₹1


# ರಾಜ್ಯ ಸರ್ಕಾರದ ವಿರುದ್ಧ ವಿಜಯೇಂದ್ರ ಟೀಕಾ ಪ್ರಹಾರ

## ಕೊಲೆಗಡುಕರು, ದೇಶದ್ರೋಹಿಭಯೋತ್ಪಾದಕರಿಗೂ ಭಯವಿಲ್ಲದ ಸ್ಥಿತಿ ಬಂದಿದೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು. ಹಳೇಬೀಡಿನ ಪುಷ್ಪಗಿರಿಯಲ್ಲಿ ಗುರುವಾರ ರಾತ್ರಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಸರ್ಕಾರದ ಒಳಗಿನ ಅಧಿಕಾರ ಪೈಪೋಟಿ ಮತ್ತು ಸಿಎಂ ಕುರ್ಚಿಗಾಗಿ ನಡೆಯುತ್ತಿರುವ ರಾಜಕೀಯ ಬಿಕ್ಕಟ್ಟನ್ನು ತೀವ್ರವಾಗಿ ಟೀಕಿಸಿದರು.

ಕಳೆದ ಎರಡುವರೆ ವರ್ಷಗಳಲ್ಲಿ ಕಾಂಗ್ರೆಸ್ ಸರ್ಕಾರ ರಾಜ್ಯದ ಅಭಿವೃದ್ಧಿಗೆ ಯಾವುದೇ ರೀತಿಯ ಅನುದಾನ ನೀಡಿಲ್ಲ. ಸರ್ಕಾರ ಯಾವ ದಿಕ್ಕಿಗೆ ಸಾಗುತ್ತಿದೆ ಎನ್ನುವುದು ಸ್ಪಷ್ಟವಾಗಿಲ್ಲ,ಟಿಟಿ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಸರ್ಕಾರ ಒಳಗೆ ಅಸಮಾಧಾನ ಕುದಿಯುತ್ತಿದೆ. ಕೆಲವರು ಬಹಿರಂಗವಾಗಿಯೇ ಸಿದ್ದರಾಮಯ್ಯ ಅವರನ್ನು ಕೆಳಗಿಳಿಸಲು ಪ್ರಯತ್ನಿಸುತ್ತಿದ್ದಾರೆ. ಡಿ.ಕೆ. ಶಿವಕುಮಾರ್ ಅವರನ್ನು ಸಿಎಂ ಮಾಡಲು ನಡೆಯುತ್ತಿರುವ ಹೋರಾಟ ಎಲ್ಲರಿಗೂ ಗೋಚರವಾಗಿದೆ ಎಂದು ವಿಜಯೇಂದ್ರ ಕಿಡಿಕಾರಿದರು. ಸರ್ಕಾರಕ್ಕೆ ರೈತರ ಬಗ್ಗೆ ಕಾಳಜಿ ಇಲ್ಲ ರಾಜ್ಯದ ರೈತರ ಪರಿಸ್ಥಿತಿ ದಿನೇದಿನೇ ಹದಗೆಡುತ್ತಿದೆ ಎಂದು ಅವರು ತಿಳಿಸಿದರು.

ಕಬ್ಬು ಬೆಳೆಗಾರರು ಬೀದಿಗಿಳಿದು ಹೋರಾಟ ನಡೆಸುತ್ತಿದ್ದಾರೆ. ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ಸರ್ಕಾರ ತೆರೆಯುತ್ತಿಲ್ಲ. ಈ ಸರ್ಕಾರಕ್ಕೆ ರೈತರ ಪ್ರಶ್ನೆಗಳ ಬಗ್ಗೆ ಅಲರ್ಜಿ ಇದೆ,ಟಿಟಿ ಎಂದು ಆರೋಪಿಸಿದರು.

ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದೆ ಎಂದು ಅವರು ಅಭಿಪ್ರಾಯಪಟ್ಟರು.

ಯಾವ ಕೊಲೆಗಡುಕರಿಗೂ, ದೇಶದ್ರೋಹಿ-ಭಯೋತ್ಪಾದಕರಿಗೂ ಭಯವಿಲ್ಲದ ಸ್ಥಿತಿ ಬಂದಿದೆ. ಪರಪ್ಪನ ಅಗ್ರಹಾರ ಜೈಲಿನಲ್ಲಿ ನಡೆದ ಘಟನೆಗಳು ಗೃಹಸಚಿವರ ನಿಷ್ಕ್ರಿಯತೆಯ ಪ್ರತೀಕ ಎಂದು ಟೀಕಿಸಿದರು.

ಕಬ್ಬು ಬೆಳೆಗಾರರ ವಿಚಾರದಲ್ಲಿ ನಾವು ಹೋರಾಟ ಆರಂಭಿಸಿದಾಗಲೇ ಮುಖ್ಯಮಂತ್ರಿ ಕುಂಭಕರ್ಣ ನಿದ್ದೆಯಿಂದ ಎದ್ದರು. ವಾಲ್ಮೀಕಿ ಹಾಗೂ ಮುಡಾ ಹಗರಣಗಳ ವಿರುದ್ಧವೂ ಬಿಜೆಪಿ ಹೋರಾಟ ನಡೆಸಿದೆ. ಮುಂದಿನ ದಿನಗಳಲ್ಲಿ ರೈತರ ಪರವಾಗಿ ಎಲ್ಲಾ ಕ್ಷೇತ್ರಗಳಲ್ಲಿ ಹೋರಾಟ ತೀವ್ರಗೊಳಿಸುತ್ತೇವೆ, ಎಂದು ಹೇಳಿದರು.

ರಾಜ್ಯಾಧ್ಯಕ್ಷಸ್ಥಾನದಲ್ಲಿ ಮುಂದುವರಿಯುವ ಬಗ್ಗೆ ಕೇಳಿದ ಪ್ರಶ್ನೆಗೆ ಅವರು, ಹಿರಿಯರಿಗೂ, ಕಾರ್ಯಕರ್ತರಿಗೂ ನನ್ನ ಕೆಲಸದ ಬಗ್ಗೆ ತೃಪ್ತಿ ಇದೆ. ಎಲ್ಲರ ಒಳ್ಳೆಯ ಅಭಿಪ್ರಾಯವಿದೆ. ಒಳ್ಳೆಯದಾಗುತ್ತದೆ ಎನ್ನುವ ವಿಶ್ವಾಸ ನನಗೆ ಇದೆ.ಟಿಟಿ ಬಿಹಾರ ಚುನಾವಣೆ ಫಲಿತಾಂಶದ ಪರಿಣಾಮ ಬಿಹಾರ ಚುನಾವಣಾ ಫಲಿತಾಂಶದಿಂದ ನಮ್ಮ ರಾಜ್ಯದ ಬಿಜೆಪಿ ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ಸೃಷ್ಟಿಯಾಗಿದೆ. ರಾಜ್ಯದಲ್ಲಿ ಯಾವಾಗ ಚುನಾವಣೆ ನಡೆದರೂ ಬಿಜೆಪಿಗೆ ಪೂರಕ ವಾತಾವರಣವಿದೆ,ಟಿಟಿ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

# ಕಾರ್ತಿಕ ಮಾಸ: ಶನೈಶ್ವರ ದೇಗುಲದಲ್ಲಿ ಪೂಜೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ತಾಲೂಕಿನ ಹೊನ್ನಮಾರನಹಳ್ಳಿ ಗ್ರಾಮದ ಶ್ರೀ ಶನೈಶ್ವರಸ್ವಾಮಿ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ಛಟ್ಟಿ ಅಮಾವಾಸ್ಯೆ ಪ್ರಯುಕ್ತ ಹೋಮ, ಪೂಜೆ ಮತ್ತು ದೀಪೋತ್ಸವ ಸೇರಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು.

ದೇಗುಲಕ್ಕೆ ಹಸಿರು ಚಪ್ಪರ ಹಾಕಿ ತಳಿರು ತೋರಣಗಳಿಂದ ಸಿಂಗರಿಸಲಾಗಿತ್ತು. ವಿದ್ಯುತ್ ದೀಪಲಂಕಾರ ಝಗಮಗಿಸುತ್ತಿದ್ದವು. ದೇವಾಲಯದ ಟ್ರಸ್ಟ್ ನ ಅಧ್ಯಕ್ಷ ಕುಮಾರಸ್ವಾಮಿ ನೇತೃತ್ವದಲ್ಲಿ ಬೆಳಗ್ಗೆ 6 ಗಂಟೆಗೆ ಶನೇಶ್ವರಸ್ವಾಮಿ ಮೂಲ ಮೂರ್ತಿಗೆ ತೈಲಾಭಿಷೇಕ ಮತ್ತು ಪಂಚಾಮೃತ ಅಭಿಷೇಕ ನಡೆಯಿತು. ನಂತರ ಗಣ ಹೋಮ, ನವಗ್ರಹ ಹೋಮ, ಶನಿ ಶಾಂತಿ ಹೋಮ ಕೈಗೊಂಡಿದ್ದು ದೇವರಿಗೆ ಪೂಜೆ ಸಲ್ಲಿಸಿ ಮಹಾಮಂಗಳಾರತಿ ನೆರವೇರಿತು.

12 ಗಂಟೆಗೆ ರಾಜ ಸತ್ಯವ್ರತ ಕಥೆಯನ್ನು ಓದಲಾಯಿತು. ಚಿಟ್ಟಿ ಮೇಳದೊಂದಿಗೆ ಸಂಜೆ 4 ಗಂಟೆಗೆ ಶನೇಶ್ವರ ಸ್ವಾಮಿಯ ಉತ್ಸವ ಮೂರ್ತಿಯ ಮೆರವಣಿಗೆ ಪ್ರಾರಂಭವಾಗಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿತು. ಸಂಜೆ 6 ಗಂಟೆಗೆ ಭಕ್ತರು ದೇವಸ್ಥಾನದ ಸುತ್ತ ದೀಪಗಳನ್ನು ಇಟ್ಟು ಬೆಳಗಿದರು. ಕೆಲವು ಭಕ್ತರು ವಿಶೇಷವಾಗಿ ಬೂದು ಕುಂಬಳ ಕಾಯಿ ಮೇಲೆ ದೀಪವನ್ನು ಹಚ್ಚಿಕೊಂಡು, ನವಗ್ರಹ ಮತ್ತು ದೇವಸ್ಥಾನದ ಸುತ್ತ ಪ್ರದಕ್ಷಿಣೆ ಹಾಕಿದರು.

ರಾತ್ರಿ 8 ಗಂಟೆಗೆ ಭಕ್ತರಿ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಿತು. ಈ ಧಾರ್ಮಿಕ ಕಾರ್ಯಕ್ರಮಗಳಲ್ಲಿ ನುಗ್ಗೇಹಳ್ಳಿಯ ಪುರವರ್ಗದ ಹಿರೇಮಠದ ಮಹೇಶ್ವರ ಶಿವಾಚಾರ್ಯ ಸ್ವಾಮೀಜಿ, ತುಮಕೂರು ಜಿಲ್ಲೆಯ ಪಾಲಕೆರಿ ಮಠದ ನಾಗರಾಜು ಸ್ವಾಮೀಜಿ, ಆದಿಚುಂಚನ ಗಿರಿ ಕಬ್ಬಳಿ ಮಠದ ಶಿವಪುತ್ರನಾಥ ಸ್ವಾಮೀಜಿ ಸೇರಿದಂತೆ ಹಲವು ಜನಪ್ರತಿನಿಧಿಗಳು ಭಾಗವಹಿಸಿದ್ದರು.

# ಆರ್‌ಎಸ್‌ಎಸ್ ನಿಷೇಧಕ್ಕೆ ಆಗ್ರಹಿಸಿ ನ. 28ಕ್ಕೆ ಪ್ರತಿಭಟನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ರಾಷ್ಟ್ರೀಯ ಸ್ವಯಂ ಸೇವಕ ಸಂಘ (ಆರ್‌ಎಸ್‌ಎಸ್)ದ ಚಟುವಟಿಕೆ ನಿಷೇಧಕ್ಕೆ ಆಗ್ರಹಿಸಿ ನ. 28 ರಂದು ನಗರದಲ್ಲಿ ಬೃಹತ್ ಪ್ರತಿಭಟನೆ ಹಾಗೂ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ದಲಿತ ಸಂಘಟನೆಗಳ ಸಮನ್ವಯ ಸಮಿತಿ ರಾಜ್ಯ ಸಂಚಾಲಕ ಎಂ. ಸೋಮಶೇಖರ್ ತಿಳಿಸಿದರು.



ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಆರ್‌ಎಸ್‌ಎಸ್, ಎಬಿವಿಪಿ, ವಿಹೆಚ್‌ಪಿ, ಭಜರಂಗದಳ ಮೊದಲಾದ ಸಂಘಟನೆಗಳು ನೋಂದಣಿ ಆಗಿರದ ಸಂಘಟನೆ. ಇವುಗಳ ಉದ್ದೇಶವೇ ಸಮಾಜ ಒಡೆಯುವುದು, ಶಾಂತಿ ಕದಡುವುದು, ಕೋಮುಗಲಭೆ, ಸಂವಿಧಾನ ವಿರೋಧಿ ಚಟುವಟಿಕೆ ನಡೆಸುವುದು ಎಂದು ದೂರಿದರು. ಈ ಸಂಘಟನೆಗಳ ವಿರುದ್ಧ ಹೋರಾಡುವ ಶಕ್ತಿ ಇರುವುದು ರಾಜ್ಯದ ಎಲ್ಲ ದಲಿತ ಸಂಘಟನೆಗಳಿಗೆ ಮಾತ್ರ, ಆರ್‌ಎಸ್‌ಎಸ್‌ಗೆ ನೂರು ವರ್ಷ ತುಂಬಿರಬಹುದು, ದಲಿತ ಸಂಘಟನೆಗಳಿಗೆ 50 ವರ್ಷ ಆಗಿರಬಹುದು, ಆದರೂ ಅವರ ವಿರುದ್ಧ ಹೋರಾಡುವ ಶಕ್ತಿ ಇದೆ ಎಂದರು.

ಸಂವಿಧಾನ ರಚನೆಯಾಗಿ 75 ವರ್ಷ ಕಳೆದಿದ್ದರೂ ಪ್ರಬುದ್ಧ ಸಮಾಜ ನಿರ್ಮಾಣ ದೂರವೇ ಇದೆ. ಧರ್ಮ, ಜಾತಿ ಆಧಾರಿತ ರಾಜಕೀಯ, ಸುಳ್ಳು ಪ್ರಚಾರ ಹಾಗೂ ಅಸಹನೆಯನ್ನು ಉದ್ದೇಶ ಪೂರ್ವಕವಾಗಿ ಹರಡುತ್ತಿರುವ ಆರೋಪಕ್ಕೆ ಒಳಗಾದ ಸಂಸ್ಥೆಗಳ ವಿರುದ್ಧ ಕ್ರಮ ಆಗಬೇಕು ಎಂದು ಆಗ್ರಹಿಸಿದರು.

ಆರ್.ಪಿ.ಐ. ರಾಜ್ಯಾಧ್ಯತ ಸತೀಶ್, ಹಿರಿಯ ದಲಿತ ಮುಖಂಡರಾದ ಕೃಷ್ಣದಾಸ್, ಹೆಚ್.ಕೆ.ಸಂದೇಶ್, ಅಂಬುಗ ಮಲ್ಲೇಶ್, ಈರೇಶ್ ಹಿರೇಹಳ್ಳಿ, ನಾರಾಯಣದಾಸ್, ಎಂ.ವಿ. ಗೋವಿಂದರಾಜು, ರಾಜೇಶ್, ಚನ್ನಕೇಶವ, ತೋಟೇಶ್ ನಿಟ್ಟೂರ್, ವಾಲ್ಮೀಕಿ ಸಮುದಾಯದ ಶಿವಪ್ಪ ನಾಯಕ ಇದ್ದರು.

# ಸಂಚಾರಕ್ಕೆ ಅಡಚಣೆ: ರಸ್ತೆಬದಿ ಹಣ್ಣಿನಂಗಡಿಗಳ ತೆರವು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸಾರ್ವಜನಿಕ ಸಂಚಾರಕ್ಕೆ ಅಡಚಣೆಯುಂಟು ಮಾಡಿದ್ದ ನಗರದ ಕಸ್ತೂರಬಾ ರಸ್ತೆಯ ಹಣ್ಣಿನ ಅಂಗಡಿಗಳನ್ನು ಮಹಾನಗರ ಪಾಲಿಕೆ ಸಿಬ್ಬಂದಿ ಗುರುವಾರ ತೆರವುಗೊಳಿಸಿದರು.

ಹಲವು ದಿನಗಳಿಂದ ರಸ್ತೆ ಬದಿಯ ಅನಧಿಕೃತ ವ್ಯಾಪಾರಗಳಿಂದ ಸಾರ್ವಜನಿಕರಿಗೆ ಹಾಗೂ ಸಂಚಾರ ತೊಂದರೆ ಉಂಟಾಗುತ್ತಿದೆ ಎಂಬ ದೂರುಗಳು ಕೇಳಿಬಂದ ಹಿನ್ನೆಲೆಯಲ್ಲಿ ಪಾಲಿಕೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಬೆಳಗ್ಗೆ ದಿಢೀರ್ ಕಾರ್ಯಾಚರಣೆ ನಡೆಸಿದರು.

ಪೌರ ಕಾರ್ಮಿಕರು, ಮೇಲ್ವಿಚಾರಕರು, ಆರೋಗ್ಯ ನಿರೀಕ್ಷಕರು ಮತ್ತು ಪಾಲಿಕೆ ಸಿಬ್ಬಂದಿ ಒಂದಾಗಿ ತಂಡ ರಚಿಸಿ ಫುಟ್‌ಪಾತ್ ಹಾಗೂ ರಸ್ತೆ ಬದಿಯಲ್ಲಿ ಹಾಕಿದ್ದ ಅಂಗಡಿಗಳನ್ನು ತೆರವುಗೊಳಿಸಿದರು.

ಈ ಸಂದರ್ಭದಲ್ಲಿ ಅನಧಿಕೃತ ವ್ಯಾಪಾರಿಗಳು ತೀವ್ರ ವಿರೋಧ ವ್ಯಕ್ತಪಡಿಸಿ ಪಾಲಿಕೆ ಸಿಬ್ಬಂದಿಗಳೊಂದಿಗೆ ವಾಗ್ವಾದ ನಡೆಸಿದ ಪ್ರಸಂಗವೂ ನಡೆಯಿತು. ಕೆಲವು ವ್ಯಾಪಾರಿಗಳು ತಮ್ಮ ಜೀವನೋಪಾಯ ಕಳೆದುಕೊಳ್ಳುತ್ತಿದ್ದೇವೆ ಎಂದು ಅಸಮಾಧಾನ ವ್ಯಕ್ತಪಡಿಸಿದರೆ, ಸಾರ್ವಜನಿಕರು ಸಂಚಾರಕ್ಕೆ ಅಡೆ ತಡೆ ಉಂಟಾಗುತ್ತಿದೆ ಎಂದು ಪಾಲಿಕೆಯ ಕ್ರಮವನ್ನು ಕೆಲವರು ಸ್ವಾಗತಿಸಿದರು.

ಮಹಾನಗರ ಪಾಲಿಕೆ ಪೌರಾಯುಕ್ತ ಕೃಷ್ಣಮೂರ್ತಿ ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿ ಪರಿಶೀಲಿಸಿದರು. ಈ ವೇಳೆ ಮಾತನಾಡಿದ ಅವರು, ಕಸ್ತೂರಬಾ ರಸ್ತೆಯ ಫುಟ್‌ಪಾತ್ ಮತ್ತು ಸಾರ್ವಜನಿಕ ಜಾಗವನ್ನು ಅನಧಿಕೃತವಾಗಿ ಹಣ್ಣಿನ ವ್ಯಾಪಾರಿಗಳು ಆಕ್ರಮಿಸಿಕೊಂಡಿದ್ದರು. ಇದು ಕೇವಲ ಸಂಚಾರಕ್ಕೆ ತೊಂದರೆಯಲ್ಲ, ಅಸ್ವಚ್ಛತೆಗೂ ಕಾರಣವಾಗುತ್ತಿತ್ತು. ಜಿಲ್ಲಾಧಿಕಾರಿಗಳು ಮತ್ತು ಸರ್ಕಾರದ ಆದೇಶದಂತೆ ಸಾರ್ವಜನಿಕ ಜಾಗದಲ್ಲಿ ವ್ಯಾಪಾರ ಮಾಡುವುದು ನಿಷೇಧ. ನಿಗದಿಪಡಿಸಿದ ಸ್ಥಳಗಳಲ್ಲಿ ಮಾತ್ರ ವ್ಯಾಪಾರ ಮಾಡಬೇಕು ಎಂದು ತಿಳಿಸಿದರು.

ರಸ್ತೆ ಬದಿ ಹಾಗೂ ಫುಟ್‌ಪಾತ್ ಮೇಲೆ ಮಳಿಗೆ ಹಾಕಿ ವ್ಯಾಪಾರ ಮಾಡುವುದನ್ನು ಮುಂದುವರೆಸಿದರೆ ಕೇಸು ದಾಖಲಿಸಿ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಸಿದರು. ಫುಟ್‌ಪಾತ್ ಜಾಗ ಸಾರ್ವಜನಿಕರ ಮುಕ್ತ ಸಂಚಾರಕ್ಕಾಗಿ. ಅದನ್ನು ಹಣ್ಣಿನ ಅಂಗಡಿಗಳಾಗಿ ಬಳಸುವಂತಿಲ್ಲ. ವ್ಯಾಪಾರಿಗಳಿಗೆ ಬದಲಾಗಿ ಸರಿಯಾದ ಸ್ಥಳಾವಕಾಶ ಒದಗಿಸಲು ಪಾಲಿಕೆ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದರು.

ತೆರವು ಕಾರ್ಯಾಚರಣೆ ನಂತರವೂ ಮತ್ತೆ ಅನಧಿಕೃತ ವ್ಯಾಪಾರ ಆರಂಭಿಸಿದರೆ ಕಠಿಣ ರೀತಿಯಲ್ಲಿ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ ಸ್ಪಷ್ಟ ಎಚ್ಚರಿಕೆ ನೀಡಿದರು. ಈ ಕ್ರಮದಿಂದ ರಸ್ತೆಯ ಎರಡೂ ಬದಿಗಳ ಸಂಚಾರ ಸುಗಮವಾಗುವ ನಿರೀಕ್ಷೆ ವ್ಯಕ್ತವಾಗಿದೆ.

# ನ.23 ರಂದು ಅಸ್ಮಿತಾ ಅಥ್ಲೆಟಿಕ್ಸ್ ಲೀಗ್



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲಾ ಅಮೆಚೂರ್ ಅಥ್ಲೆಟಿಕ್ ಸಂಸ್ಥೆ ವತಿಯಿಂದ ನ.23ರ ಬೆಳಿಗ್ಗೆ 9.30ಕ್ಕೆ ನಗರದ ಜಿಲ್ಲಾ ಸಿಂಥೆಟಿಕ್ ಕ್ರೀಡಾಂಗಣದಲ್ಲಿ ಬಾಲಕಿಯರಿಗಾಗಿ ಜಿಲ್ಲಾ ಮಟ್ಟದ

ಅಸ್ಮಿತಾ ಅಥ್ಲೆಟಿಕ್ಸ್ ಸ್ಪರ್ಧೆ ಏರ್ಪಡಿಸಲಾಗಿದೆ ಎಂದು ಸಂಸ್ಥೆಯ ಜಂಟಿ ಕಾರ್ಯದರ್ಶಿ ಎಸ್.ಎಲ್.ಪ್ರಸನ್ನ ಕುಮಾರ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಕ್ರೀಡಾ ಪ್ರತಿಭೆಗಳ ಅನ್ವೇಷಣೆ, ಗ್ರಾಮೀಣ ಹೆಣ್ಣು ಮಕ್ಕಳಿಗೆ ಉತ್ತೇಜನ, ಅವರ ಭಾಗಹಿಸುವಿಕೆ ಹೆಚ್ಚು ಮಾಡುವ ಉದ್ದೇಶದಿಂದ ಈ ಸ್ಪರ್ಧೆ ಆಯೋಜನೆ ಮಾಡಲಾಗುತ್ತಿದೆ ಎಂದು ಹೇಳಿದರು. 12-14 ವರ್ಷ ಹಾಗೂ 14-16 ವರ್ಷದ ಹೆಣ್ಣು ಮಕ್ಕಳಿಗೆ ಸ್ಪರ್ಧೆ ನಡೆಯಲಿದೆ. ಕೇಂದ್ರ ಸರ್ಕಾರದ ಖೇಲೋ ಇಂಡಿಯಾ ಕಾರ್ಯಕ್ರಮದಡಿ, ಸ್ಪೋರ್ಟ್ಸ್ ಅಥಾರಿಟಿ ಆಫ್ ಇಂಡಿಯಾ(ಸಾಯಿ), ಯುವಜನ ಮತ್ತು ಕ್ರೀಡಾ ಸಚಿವಾಲಯ ಹಾಗೂ ಇಂಡಿಯನ್ ಅಥ್ಲೆಟಿಕ್ ಫೆಡರೇಶನ್ ಸಂಯುಕ್ತವಾಗಿ ದೇಶಾದ್ಯಂತ ಸ್ಪರ್ಧೆ ಆಯೋಜನೆ ಮಾಡಲಾಗುತ್ತಿದೆ ಎಂದರು.

14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಬಾಲಕಿಯರಿಗಾಗಿ ಟ್ರಯಾಥ್ಲನ್, ಮೂರು ವಿಭಾಗಗಳಿದ್ದು, ಎ ವಿಭಾಗ: 60 ಮೀ. ಓಟ, ಲಾಂಗ್‌ಜಂಪ್, ಹೈಜಂಪ್, ಬಿ ವಿಭಾಗ:


60 ಮೀ. ಓಟ, ಲಾಂಗ್‌ಜಂಪ್, ಶಾಟ್‌ಪುಟ್, ಸಿ ವಿಭಾಗ: 60 ಮೀ. ಓಟ, 600 ಮೀ. ಓಟ, ಲಾಂಗ್‌ಜಂಪ್, ಕಿಡ್ಸ್ ಜಾವೆಲಿನ್ 16 ವರ್ಷದೊಳಗಿನ ಬಾಲಕಿಯರಿಗಾಗಿ ವಿವಿಧ ಓಟ, ಜಂಪ್ ಹಾಗೂ ಡಿಸ್ಕಸ್ ಥ್ರೋ ಸ್ಪರ್ಧೆಗಳು ನಡೆಯಲಿವೆ ಎಂದು ವಿವರಿಸಿದರು.

14 ವರ್ಷದೊಳಗಿನ ಬಾಲಕಿಯರು: 2011 ಡಿ.21 ರಿಂದ 2013 ಡಿ.20 ನಡುವೆ ಜನಿಸಿರಬೇಕು. 16 ವರ್ಷದೊಳಗಿನ ಬಾಲಕಿಯರು: 2009 ಡಿ.21 ರಿಂದ 2011 ಡಿ.20 ರ ನಡುವೆ ಜನಿಸಿರಬೇಕು. ವಿಜೇತರ ಆಯ್ಕೆ ಮತ್ತು ಅಂತಾರಾಷ್ಟ್ರೀಯ ಕ್ರೀಡಾಪಟುಗಳ ಸಮುಖದಲ್ಲಿ ಸ್ಪರ್ಧೆಗಳ ಮೌಲ್ಯಮಾಪನಕ್ಕಾಗಿ ಅಂತಾರಾಷ್ಟ್ರೀಯ ಕ್ರೀಡಾಪಟು ಎಂ.ಕೆ. ಆಶಾ ಹಾಗೂ ಎಎಫ್‌ಐ ನೇಮಿಸಿರುವ ತರಬೇತಿದಾರರು ಹಾಜರಾಗಲಿದ್ದಾರೆ ಎಂದು ಹೇಳಿದರು. ಕೇಂದ್ರ ಸರಕಾರದ ಉದ್ಯೋಗಗಳಲ್ಲಿ ಶೇ.3 ರಷ್ಟು ಮೀಸಲು, ರಾಜ್ಯ ಸರ್ಕಾರ ಹಾಗೂ ಪೊಲೀಸ್ ಇಲಾಖೆಯಲ್ಲಿ ಕೂಡ ಕ್ರೀಡಾಪಟುಗಳಿಗೆ ವಿಶೇಷ ಅವಕಾಶ ಇದ್ದು, ಜಿಲ್ಲೆಯ ಬಾಲಕಿಯರು ಈ ಅವಕಾಶ ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾಂಗ್ರೆಸ್ ಮುಖಂಡ ಡಿ.ಸಿ. ಚಂದ್ರಶೇಖರ್ ಕ್ರೀಡಾಕೂಟ ಉದ್ಘಾಟಿಸಲಿದ್ದು, ಯುವ ಸಬಲೀಕರಣ ಕ್ರೀಡಾ ಇಲಾಖೆ ಅಧಿಕಾರಿ ಡಾ.ಆನಂದಮೂರ್ತಿ, ಅಂತಾರಾಷ್ಟ್ರೀಯ ಅಥ್ಲೆಟಿಕ್ ಕ್ರೀಡಾಪಟು ಎಂ.ಕೆ. ಆಶಾ, ಟೈಮ್ಸ್ ಗ್ರೂಪ್ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಬಿ.ಕೆ. ಗಂಗಾಧರ್, ಸರ್ಕಾರಿ ಕಲಾ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಟಿ.ಆರ್. ಮಹೇಂದ್ರ ಕುಮಾರ್ ಮೊದಲಾದವರು ಹಾಜರಿರುವರು ಎಂದರು. ಸಂಸ್ಥೆಯ ನವೀನ್ ಕುಮಾರ್, ಅಜಯ್ ಇದ್ದರು.

# ಆರ್‌ಟಿಐ ದಾಖಲೆ ಪಡೆಯಲು ಹಸು ಮಾರಾಟ ಮಾಡಿದ ರೈತ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಅರಕಲಗೂಡು: ಸರ್ಕಾರಿ ಕಚೇರಿಗಳಿಗೆ ವಿನಾಕಾರಣ ಅಲೆದಾಡಿಸುವ ಅಧಿಕಾರಿಗಳ ಪ್ರವೃತ್ತಿಯಿಂದ ಬೇಸತ್ತ ರೈತನೊಬ್ಬ ಮಾಹಿತಿ ಹಕ್ಕು ಕಾಯ್ದೆಯಡಿ ಗ್ರಾಮ ಪಂಚಾಯಿಯೊಂದರ ಕಾಮಗಾರಿಗಳಿಗೆ ಸಂಬಂಧಿಸಿದ ಸಾವಿರಾರು ಪುಟಗಳ ದಾಖಲಾತಿಯನ್ನು ಮಾಹಿತಿ ಹಕ್ಕು ಕಾಯ್ದೆಯಡಿ ಪಡೆದುಕೊಂಡಿದ್ದಾರೆ.

ವಿಶೇಷವೆಂದರೆ ಕಡತಗಳನ್ನು ಪಡೆಯಲು ಶುಲ್ಕಕ್ಕೆ ಹಣ ಹೊಂದಿಸಲು ಒಂದು ಹಸುವನ್ನೇ ಅವರು ಮಾರಾಟ ಮಾಡಿದ್ದಾರೆ. ಕಡೆಗೆ 32 ಸಾವಿರ ಪುಟಗಳ ದಾಖಲಾತಿಗಳನ್ನು ಎತ್ತಿನ ಗಾಡಿಯಲ್ಲಿ ತುಂಬಿ ಮನೆಗೆ ತಂದಿದ್ದಾರೆ.


ರಾಮನಾಥಪುರ ಹೋಬಳಿ ಬಸವನಹಳ್ಳಿ ಗ್ರಾಮದ ಬಿ.ಎಸ್. ರವಿ ಎಂಬವರು ಕಾಳೇನಹಳ್ಳಿ ಗ್ರಾಮ ಪಂಚಾಯಿತಿ ವತಿಯಿಂದ ನಡೆದಿರುವ ನೂರಾರು ಕಾಮಗಾರಿಗಳ ಅನುಷ್ಠಾನಕ್ಕೆ ಸಂಬಂಧಿಸಿದ ಎಲ್ಲಾ ದಾಖಲಾತಿಗಳನ್ನು ಕೋರಿ ಮಾಹಿತಿ ಹಕ್ಕು ಕಾಯ್ದೆಯಡಿ ಅರ್ಜಿ ಸಲ್ಲಿಸಿದ್ದರು.

ಅದಕ್ಕೆ ಪ್ರತಿಯಾಗಿ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ನೋಟಿಸ್ ನೀಡಿ ಬೇಕಾದ ದಾಖಲೆಗಳನ್ನು ಪಡೆದುಕೊಳ್ಳಲು ಕಡತಗಳನ್ನು ಪರಿಶೀಲಿಸಲು ತಿಳಿಸಿದ್ದರು. ಅರ್ಜಿದಾರ ಬಯಸಿದ ದಾಖಲೆಗಳು 16370 ಪ್ರಟಗಳು ಇದ್ದಿದ್ದರಿಂದ ಪ್ರತಿ ಕಾಪಿಗೆ 2 ರೂ.ನಂತೆ 32,340 ರೂ. ಶುಲ್ಕವನ್ನು ಡಿಡಿ ಮೂಲಕ ಪಾವತಿಸಲು ಸೂಚಿಸಿದ್ದರು. ಅದರನ್ವಯ 16370 ಪ್ರತಿಗಳನ್ನು ಅಂಚೆ ಮೂಲಕ ಪಿಡಿಒ ಒದಗಿಸಿದ್ದರು. ಆ ಬೃಹತ್ ದಾಖಲೆಗಳನ್ನು ಅರ್ಜಿದಾರ ಬಿ.ಎಸ್.ರವಿ ತಮ್ಮ ಎತ್ತಿನಗಾಡಿಯಲ್ಲಿ ತುಂಬಿಕೊಂಡು ಮನೆಗೆ ತಂದಿದ್ದಾರೆ. ಮಾಹಿತಿ ಹಕ್ಕು ಅರ್ಜಿಯಡಿ ದಾಖಲೆಯ ಶುಲ್ಕ ಪಡೆಯಲು ತಮ್ಮ ಮನೆಯಲ್ಲಿದ್ದ ಒಂದು ಹಸುವನ್ನು ಮಾರಾಟ ಮಾಡಿ 25 ಸಾವಿರ ರೂ. ಹಾಗು ಉಳಿಕೆ ಹಣವನ್ನು ಸ್ನೇಹಿತರಿಂದ ಸಾಲವಾಗಿ ಪಡೆದಿದ್ದಾರೆ.

ಆ ದಾಖಲೆಗಳನ್ನು ತಾವು ಕೂಲಂಕುಷವಾಗಿ ಪರಿಶೀಲಿಸಲಿದ್ದು, ಯಾವುದಾದರೂ ಅಕ್ರಮ ಕಂಡು ಬಂದರೆ ಲೋಕಾಯುಕ್ತಕ್ಕೆ ದೂರು ಸಲ್ಲಿಸುತ್ತೇನೆ. ನಾನು ದಾಖಲೆ ಕೋರಿ ಅರ್ಜಿ ಸಲ್ಲಿಸಿದ ನಂತರ ಅರ್ಜಿ ಹಿಂಪಡೆಯುವ ಹಲವು ಆಮಿಷಗಳನ್ನು ಒಡ್ಡಲಾಯಿತು. ಅದಕ್ಕೆ ಬಗ್ಗದಿದ್ದಾಗ ನಾನು ದೌರ್ಜನ್ಯ ಎಸಗಿದ್ದೇನೆ ಎಂದು ಆರೋಪಿಸಿ ಕೆಲವು ಗ್ರಾಮ ಪಂಚಾಯಿತಿ ಸದಸ್ಯರು ಪೊಲೀಸ್ ಠಾಣೆಗೆ ಸುಳ್ಳು ದೂರು ನೀಡಿದ್ದಾರೆ. ಈ ಮೂಲಕ ನನ್ನ ಧ್ವನಿ ತಗ್ಗಿಸಲು ಸಾಧ್ಯವಿಲ್ಲ. ನಾವು ಏನಾದರೂ ದಾಖಲೆ ಕೇಳಿಕೊಂಡು ಕಚೇರಿಗಳಿಗೆ ಹೋದರೆ ಇಲ್ಲದ ನಿಯಮ ಪ್ರಸ್ತಾಪಿಸಿ ಜನಸಾಮಾನ್ಯರನ್ನು ಅಲೆದಾಡಿಸುತ್ತಾರೆ. ಜನರಿಗೆ ತೊಂದರೆ ನೀಡುವವರು ಎಲ್ಲ ನಿಯಮ ಪಾಲಿಸಿದ್ದಾರೆಯೇ ಎನ್ನುವುದನ್ನು ಅರಿಯಲು ಈ ದಾಖಲೆಗಳನ್ನು ಪಡೆದುಕೊಂಡಿದ್ದೇನೆ ಎಂದು ರವಿ ಹೇಳಿದ್ದಾರೆ.

# ಗ್ರಂಥಾಲಯ ಅಭಿವೃದ್ಧಿಗೆ ಅನುದಾನದ ಭರವಸೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ತಾಲೂಕು ಗ್ರಂಥಾಲಯಕ್ಕೆ ಮುಂದಿನ ದಿನಗಳಲ್ಲಿ ಹೆಚ್ಚಿನ ಆನುದಾನ ನೀಡಲಾಗುವುದು ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಭರವಸೆ ನೀಡಿದರು.

ಪಟ್ಟಣದ ಸಾರ್ವಜನಿಕ ಗ್ರಂಥಾಲಯದಲ್ಲಿ ಗ್ರಂಥಾಲಯ ಸಪ್ತಾಹ ಸಮಾರೋಪ ಸಮಾರಂಭದಲ್ಲಿ ಮಾತನಾಡಿ, ಪುಸ್ತಕ ಓದುವ ಹವ್ಯಾಸ ಉಳ್ಳವರು ಎಲ್ಲೇ ಹೋದರೂ ಸಂತೋಷವಾಗಿರುತ್ತಾರೆ. ಓದಿನಿಂದ ಗುರಿ ಸಾಧಿಸಬಹುದು ಎಂದರು.

ಮಾನಸಿಕ ಸಮತೋಲನ ಕಾಪಾಡುವುದು ಓದಿನಿಂದ ಮಾತ್ರ ಸಾಧ್ಯ. ಪಟ್ಟಣದಲ್ಲಿರುವ ಗ್ರಂಥಾಲಯವು ಸುಸಜ್ಜಿತವಾಗಿದ್ದು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಸಹಕಾರಿಯಾಗಿದೆ. ಇಲ್ಲಿ ಓದಿದ ಎಷ್ಟೋ ಜನ ಸರ್ಕಾರಿ ಕೆಲಸಗಳನ್ನು ಪಡೆದುಕೊಂಡಿದ್ದು ನಿಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಉತ್ತಮ ಮಾರ್ಗವಾಗಿದೆ ಎಂದು ತಿಳಿಸಿದರು.

ಪುಸ್ತಕವನ್ನು ಸ್ನೇಹಿತರನ್ನಾಗಿ ನೋಡಿ ದೇವಸ್ಥಾನ ಎಷ್ಟು ಮುಖ್ಯವೋ ಗ್ರಂಥಾಲಯ ಕೂಡ ಅಷ್ಟೇ ಮುಖ್ಯವಾಗಿದೆ. ತಾಲೂಕಿನ ಹಲವು ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಡಿಜಿಟಲ್ ಗ್ರಂಥಾಲಯದ ಅನುಕೂಲತೆ ಇದ್ದು ಗ್ರಾಮೀಣ ಪ್ರದೇಶದಲ್ಲೂ ಓದುವ ಹವ್ಯಾಸವನ್ನು ಬಲಪಡಿಸಿದಂತಾಗಿದೆ ಎಂದರು.

ಡಿವೈಎಸ್‌ಪಿ ಕುಮಾರ್ ಮಾತನಾಡಿ, ವಿದ್ಯಾರ್ಥಿ ಜೀವನ ಗೋಲ್ಡ್ ಲೈಫ್ ನಿಜ. ಆದರೆ ಇಂದಿನ ವಿದ್ಯಾರ್ಥಿಗಳು ಮೊಬೈಲ್ ಮತ್ತು ಟಿವಿ, ಸೀರಿಯಲ್‌ಗೆ ಮಾರು ಹೋಗಿ ಭವಿಷ್ಯವನ್ನೇ ಹಾಳು ಮಾಡಿಕೊಳ್ಳುತ್ತಿದ್ದಾರೆ.

ಮೊಬೈಲ್ ಹೆಚ್ಚು ನೋಡಿದರೆ ಕಣ್ಣಿನಲ್ಲಿ ನೀರು ಬರುತ್ತದೆ. ಜ್ಞಾಪಕಾ ಶಕ್ತಿ ಕಡಿಮೆಯಾಗುತ್ತದೆ ಎಂದರು.

ಇಂದಿನ ಅಧ್ಯಯನ ತಜ್ಞರು ತಿಳಿಸುತ್ತಿದ್ದಾರೆ. ಸಮಾಜದ ಆಸ್ತಿ ಮತ್ತು ಶಕ್ತಿಯಂತವರಾಗಬೇಕಾದರೆ ಪುಸ್ತಕದ ಅಧ್ಯಯನ ಹೆಚ್ಚು ಬೇಕು. ತಾವು ಶ್ರೀರಂಗಪಟ್ಟಣದಲ್ಲಿ ಗ್ರಂಥಾಲಕಯದ ಬಳಕೆಯನ್ನು ಮಾಡಿಕೊಂಡಿದ್ದು ನನ್ನ ಜೀವನಕ್ಕೆ ತುಂಬಾ ಉಪಯೋಗವಾಯಿತು.

ವಿಜ್ಞಾನ ಮತ್ತು ಗಣಿತಿ ನನ್ನ ನೆಚ್ಚಿನ ವಿಷಯವಾಗಿದ್ದು ಚಿನ್ನದ ಪದಕವನ್ನು ಸಹ ಪಡೆದಿದ್ದು ಇಂದು ಸಹ ಹಲವು ಪುಸ್ತಕಗಳನ್ನು ಸಂಗ್ರಹಿಸಿದ್ದೇನೆ ಎಂದು ತಿಳಿಸಿದರು.

ಸಾಹಿತಿ ಜಯಂತಿ ಚಂದ್ರಶೇಖರ್ ರವರ ಸಕ್ಕರೆ ಬಟ್ಟಲು ಪುಸ್ತಕವನ್ನ ಬಿಡುಗಡೆ ಮಾಡಲಾಯಿತು. ವಿವಿಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ವಸುಮತಿ ಜೈನ್, ಗ್ರಂಥಪಾಲಕ ದೇವರಾಜ್, ಕನ್ನಡವಾಸು, ಮಹೇಶ್, ರೇವಣ್ಣ, ವಿಜಯಕುಮಾರ್ ಮತ್ತಿತರಿದ್ದರು.

